# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2017-18ನೇ ಸಾಲಿನ ಆಯವ್ಯಯ ಘೋಷಣಾ ಕಾರ್ಯಕ್ರಮವಾದ ಇಂಜಿನಿಯರಿಂಗ್, ವೈದ್ಯಕೀಯ, ಪಾಲಿಟೆಕ್ನಿಕ್ ಮತ್ತು ಪ್ರಥಮ ದರ್ಜೆ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ 2017-18ನೇ ಸಾಲಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸುವ ಸಂಬಂಧ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ:- 2017-18ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 110.

**ಪ್ರಸ್ತಾವನೆ:-**

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕಂಡಿಕೆ 110 ರಲ್ಲಿ ಇಂಜಿನಿಯರಿಂಗ್, ವೈದ್ಯಕೀಯ, ಪಾಲಿಟೆಕ್ನಿಕ್ ಮತ್ತು ಪ್ರಥಮ ದರ್ಜೆ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ 2017-18ನೇ ಸಾಲಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು 1.5 ಲಕ್ಷ ವಿದ್ಯಾರ್ಥಿಗಳಿಗೆ ವಿತರಿಸಲು ಪ್ರಸ್ತಾಪಿಸಿದ್ದು, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಹಾಗೂ ಮೇಲ್ವಿಚಾರಣೆ ಕೈಗೊಳ್ಳಲು ಒಂದು ಸಮಿತಿಯ ರಚನೆ ಅಗತ್ಯವಿರುತ್ತದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ: 72 ಹೆಚ್‌ಪಿಯು 2017 ಬೆಂಗಳೂರು, ದಿನಾಂಕ: 15-04-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನಲ್ಲಿ ಇಂಜಿನಿಯರಿಂಗ್, ವೈದ್ಯಕೀಯ, ಪಾಲಿಟೆಕ್ನಿಕ್ ಮತ್ತು ಪ್ರಥಮ ದರ್ಜೆ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯುಕ್ತರು,ಕಾಲೇಜು ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಅಧಿಕಾರಿಗಳ ಸಮಿತಿಯನ್ನು ರಚಿಸಿದೆ.

| ಹುದ್ದೆ | ಪದನಾಮ |
|---|---|
| ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು | ಅಧ್ಯಕ್ಷಕರು |
| ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ಸರ್ಕಾರದ ಉಪಕಾರ್ಯದರ್ಶಿ, ಶಿಕ್ಷಣ ಇಲಾಖೆ (ಯೋಜನೆ) | ಕಾರ್ಯದರ್ಶಿ |

ಸಮಿತಿಯ ಕಾರ್ಯವ್ಯಾಪ್ತಿ:

1. ಪ್ರಸ್ತಾಪಿತ ಯೋಜನೆಯಡಿ ಒಳಪಡುವ ವಿದ್ಯಾರ್ಥಿಗಳನ್ನು ಗುರುತಿಸುವುದು.
2. ಸದರಿ ಯೋಜನೆಗೆ ಒಳಪಡುವ ವಿದ್ಯಾರ್ಥಿಗಳ ನಿರ್ದಿಷ್ಟ ಸಂಖ್ಯೆ ನಿಗಧಿಪಡಿಸುವುದು

3. ಸದರಿ ಯೋಜನೆಗೆ ಒಳಪಡಲು ವಿದ್ಯಾರ್ಥಿಗಳಿಗೆ ಅರ್ಹತೆಯನ್ನು ನಿಗದಿಪಡಿಸುವುದು.
4. ಲ್ಯಾಪ್‌ಟಾಪ್ ಖರೀದಿಗೆ ಅಗತ್ಯವಿರುವ ಒಟ್ಟಾರೆ ಅನುದಾನ ಮತ್ತು ಅನುದಾನದ ಮೂಲಗಳನ್ನು ಗುರುತಿಸುವುದು.
5. ಸಂಬಂಧಪಟ್ಟ ಇತರ ವಿಷಯಗಳು.

ಈ ಸಮಿತಿಯು ಮೇಲ್ಕಂಡ ಅಂಶಗಳ ಕುರಿತು ಕೂಲಂಕಷವಾಗಿ ಪರಿಶೀಲಿಸಿ, ವರದಿಯನ್ನು 15 ದಿವಸದೊಳಗೆ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

15/4

(ಅಪರ್ಣಾ ಪಾವಟೆ)
ಆಂತರಿಕ ಸಲಹೆಗಾರರು ಮತ್ತು
ಸರ್ಕಾರದ ಉಪಕಾರ್ಯದರ್ಶಿ(ಯೋಜನೆ)
ಶಿಕ್ಷಣ ಇಲಾಖೆ

ಇವರಿಗೆ:-

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, ಶಿಕ್ಷಣ ಇಲಾಖೆ (ಯೋಜನೆ), ಬೆಂಗಳೂರು.

ಪ್ರತಿಯನ್ನು :

✓ ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

✓ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.